ಪ್ರಶ್ನೆ ಸಂಖ್ಯೆ : (190) 39 ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ)

ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ.

ಅ) ಯಳಂದೂರು ತಾಲ್ಲೂಕಿನ ಮದ್ದೂರು ಮತ್ತು ಕೊಳ್ಳೇಗಾಲ ತಾಲ್ಲೂಕಿನ ಸತ್ತೇಗಾಲದಲ್ಲಿ ಪೊಲೀಸ್ ಡಿನ್‌ಪೋಸ್ಟ್ ತೆರೆಯಲು ಮನವಿ ಸಲ್ಲಿಸಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ, ಈ ಮನವಿಗಳ ಬಗ್ಗೆ ಕೈಗೊಂಡ ಕ್ರಮಗಳೇನು?

ಇ) ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಂ.ಪಿ.ಪ್ರಕಾಶ್ ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು

ಅ) ಯಳಂದೂರು ತಾಲ್ಲೂಕಿನ ಮದ್ದೂರು ಮತ್ತು ಕೊಳ್ಳೇಗಾಲ ತಾಲ್ಲೂಕಿನ ಸತ್ತೇಗ್ರಾಮದಲ್ಲಿ ಪೊಲೀಸ್ ಔಸ್ಪಪೋಸ್ಟ್ ತೆರೆಯಲು ಯಾವುದೇ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪ್ರಶ್ನೆ ಸಂಖ್ಯೆ : (207) 41 ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ)

ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಪುರಸಭೆ ವಾರ್ಡ್‌ಗಳ ಮೀಸಲಾತಿಯನ್ನು ಯಾವ ಆಧಾರದ ಮೇಲೆ ನಿರ್ಧರಿಸಲಾಗಿದೆ;